**All India Radio: Bangalore**
**National Bulletin In Kannada**
**27.12.2024 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**27.12.2024 13.10 p.m.**
*************

ಮುಖ್ಯಾಂಶಗಳು

೧. ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ನಿಧನ; ಜಾಗತಿಕ ನಾಯಕರಿಂದ ಸಂತಾಪ - ರಾಷ್ಟ್ರಪತಿ ಸೇರಿದಂತೆ ಪ್ರಮುಖ ಗಣ್ಯರಿಂದ ಅಂತಿಮ ದರ್ಶನ

೨. ಅದ್ಭುತ ಅರ್ಥಶಾಸ್ತ್ರಜ್ಞ, ನಾಯಕ ಡಾ.ಮನಮೋಹನ್ ಸಿಂಗ್ ಅವರ ಪ್ರಾಮಾಣಿಕತೆ ಅನುಕರಣೀಯ - ಪ್ರಧಾನಿ ನರೇಂದ್ರ ಮೋದಿ

೩. ಕೃತಕ ಬುದ್ಧಿಮತ್ತೆಯ ಜವಾಬ್ದಾರಿಯುತ ಹಾಗೂ ನೈತಿಕ ಅಳವಡಿಕೆಗೆ ಚೌಕಟ್ಟು ಅಭಿವೃದ್ಧಿಪಡಿಸಲು ಆರ್‌ಬಿಐನಿಂದ ೮ ಸದಸ್ಯರ ಸಮಿತಿ ಸ್ಥಾಪನೆ

೪. ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್; ಎರಡನೇ ದಿನದಾಟದ ಅಂತ್ಯಕ್ಕೆ ೫ ವಿಕೆಟ್ ನಷ್ಟಕ್ಕೆ ೧೬೪ ರನ್ ಗಳಿಸಿದ ಭಾರತ

೫. ಸಂತೋಷ್ ಟ್ರೋಫಿ ಫುಟ್‌ಬಾಲ್ ಪಂದ್ಯಾವಳಿ; ಇಂದು ಕೇರಳ-ಜಮ್ಮು-ಕಾಶ್ಮೀರ ಮುಖಾಮುಖಿ

*************

ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ನಿನ್ನೆ ರಾತ್ರಿ ನವದೆಹಲಿಯಲ್ಲಿ ನಿಧನರಾಗಿದ್ದಾರೆ. ಅವರಿಗೆ ೯೨ ವರ್ಷ ವಯಸ್ಸಾಗಿತ್ತು.

ಡಾ. ಮನಮೋಹನ್ ಸಿಂಗ್ ಅವರು ದೆಹಲಿಯ ಏಮ್ಸ್‌ನಲ್ಲಿ ಕೊನೆಯುಸಿರೆಳೆದರು. ವಯೋಸಹಜ ಕಾಯಿಲೆಯ ಪರಿಣಾಮ ತೀವ್ರ ಉಸಿರಾಟದ ಸಮಸ್ಯೆಯಿಂದಾಗಿ ನಿನ್ನೆ ಸಂಜೆ ಮನೆಯಲ್ಲಿ ಹಠಾತ್ ಪ್ರಜ್ಞೆ ಕಳೆದುಕೊಂಡು ಗಂಭೀರ ಸ್ಥಿತಿಯಲ್ಲಿದ್ದ ಅವರನ್ನು ರಾತ್ರಿ ೮ ಗಂಟೆ ಸುಮಾರಿಗೆ ಏಮ್ಸ್‌ನ ತುರ್ತು ಚಿಕಿತ್ಸಾ ವಿಭಾಗಕ್ಕೆ ದಾಖಲಿಸಲಾಯಿತು.
ರಾತ್ರಿ ೯.೫೧ ಕ್ಕೆ ನಿಧನರಾದ ಅವರನ್ನು ಎಲ್ಲಾ ಪ್ರಯತ್ನಗಳ ಹೊರತಾಗಿಯೂ, ಉಳಿಸಲು ಸಾಧ್ಯವಾಗಲಿಲ್ಲ ಎಂದು ಏಮ್ಸ್, ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಳೆದ ಕೆಲವು ತಿಂಗಳುಗಳಿಂದ ಡಾ.ಸಿಂಗ್ ಅವರ ಆರೋಗ್ಯ ಹದಗೆಟ್ಟಿತ್ತು. ಅವರು ಪತ್ನಿ ಗುರುಶರಣ್ ಕೌರ್ ಮತ್ತು ಮೂವರು ಪುತ್ರಿಯರನ್ನು ಅಗಲಿದ್ದಾರೆ.

ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿಧನದ ಗೌರವಾರ್ಥ ಏಳು ದಿನಗಳ ರಾಷ್ಟ್ರೀಯ ಶೋಕಾಚರಣೆಯನ್ನು ಘೋಷಿಸಲಾಗಿದೆ. ಇಂದು ನಡೆಯಬೇಕಿದ್ದ ಎಲ್ಲಾ ಸರ್ಕಾರಿ ಕಾರ್ಯಕ್ರಮಗಳನ್ನು ರದ್ದುಗೊಳಿಸಲಾಗಿದೆ ಎಂದು ಮೂಲಗಳು ಖಚಿತಪಡಿಸಿವೆ.

ಅವರ ಕುರಿತಂತೆ ಒಂದು ವರದಿ..

ಡಾ. ಮನಮೋಹನ್ ಸಿಂಗ್ ಅವರು ಭಾರತದ ಪ್ರಸಿದ್ಧ ಅರ್ಥಶಾಸ್ತ್ರಜ್ಞರು, ಶಿಕ್ಷಕರು ಮತ್ತು ರಾಜಕಾರಣಿಗಳಾಗಿದ್ದರು. ಅವರು ೨೦೦೪ ರಿಂದ ೨೦೧೪ ರವರೆಗೆ ಭಾರತದ ೧೩ನೇ ಪ್ರಧಾನಮಂತ್ರಿ ಆಗಿ ಸೇವೆ ಸಲ್ಲಿಸಿ, ದೇಶದ ಆರ್ಥಿಕ ಪ್ರಗತಿ ಮತ್ತು ಸಾಮಾಜಿಕ ಕಲ್ಯಾಣದ ಮಾರ್ಗವನ್ನು ಬೆಳಗಿಸಿದರು. ಅವರ ಶಿಸ್ತಿನ ನಾಯಕತ್ವ ಮತ್ತು ಸುಧಾರಣಾ ನೀತಿಗಳು ದೇಶದ ಆರ್ಥಿಕ ಪ್ರಗತಿಗೆ ಕಾರಣವಾದವು.

೧೯೩೨ರ ಸೆಪ್ಟೆಂಬರ್ ೨೬ರಂದು ಈಗಿನ ಪಾಕಿಸ್ತಾನದಲ್ಲಿರುವ ಪಂಜಾಬ್‌ನ ಗಹ್ ಎಂಬ ಊರಲ್ಲಿ ಜನಿಸಿದ ಅವರು, ಪಂಜಾಬ್ ವಿಶ್ವವಿದ್ಯಾಲಯ ಹಾಗೂ ಕೇಂಬ್ರಿಡ್ಜ್ ವಿಶ್ವವಿದ್ಯಾಲಯದಲ್ಲಿ ಉನ್ನತ ಶಿಕ್ಷಣ ಪಡೆದು, ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಿಂದ ಅರ್ಥಶಾಸ್ತ್ರದಲ್ಲಿ ಡಾಕ್ಟರೇಟ್ ಪದವಿ ಪಡೆದರು.

ತಮ್ಮ ವೃತ್ತಿಜೀವನವನ್ನು ಅರ್ಥಶಾಸ್ತ್ರಜ್ಞರಾಗಿ ಆರಂಭಿಸಿದ ಅವರು ಮುಂದೆ ಭಾರತದ ಪ್ರಧಾನ ಆರ್ಥಿಕ ಸಲಹೆಗಾರ ಹಾಗೂ ರಿಸರ್ವ್ ಬ್ಯಾಂಕ್ ಗವರ್ನರ್ ಆಗಿ ದೇಶಕ್ಕೆ ಅಪಾರ ಕೊಡುಗೆ ನೀಡಿದರು.

೧೯೯೧ರಲ್ಲಿ ಭಾರತ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿದ್ದಾಗ, ಹಣಕಾಸು ಸಚಿವರಾಗಿದ್ದ ಅವರು ಕೈಗೊಂಡ ಆರ್ಥಿಕ ನೀತಿಗಳಿಗಾಗಿ ದೇಶ ಅವರನ್ನು ಎಂದಿಗೂ ಸ್ಮರಿಸುತ್ತದೆ. ೨೦೦೪ರಲ್ಲಿ ಭಾರತದ ೧೩ನೇ ಪ್ರಧಾನಮಂತ್ರಿಯಾಗಿ ಆಯ್ಕೆಯಾದ ಡಾ. ಸಿಂಗ್, ಹತ್ತು ವರ್ಷಗಳ ಅವಧಿಯಲ್ಲಿ ದೇಶದ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದರು.

ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ-ಮನ್ರೇಗಾ, ಮಾಹಿತಿ ಹಕ್ಕು ಕಾಯಿದೆ ಮತ್ತು ಭಾರತ-ಅಮೆರಿಕಾ ಅಣು ಒಪ್ಪಂದ ಸೇರಿದಂತೆ ಇತರ ಕ್ರಮಗಳಿಂದಾಗಿ ಹಲವಾರು ರಾಷ್ಟ್ರಗಳೊಂದಿಗೆ ಸಂಬಂಧಗಳನ್ನು ಬಲಪಡಿಸಿ, ದೇಶದ ಅಭಿವೃದ್ಧಿಗೆ ಭದ್ರ ಬುನಾದಿ ಹಾಕಿದರು.

೩೩ ವರ್ಷಗಳ ಕಾಲ ಸೇವೆ ಸಲ್ಲಿಸಿದ ನಂತರ ಈ ವರ್ಷ ಏಪ್ರಿಲ್‌ನಲ್ಲಿ ರಾಜ್ಯಸಭೆಯಿಂದ ಅವರು ನಿವೃತ್ತರಾದರು.

ದೇಶಕ್ಕೆ ಅವರು ನೀಡಿದಂತಹ ಅಪಾರ ಕೊಡುಗೆಗಳಿಗೆ ಕೇಂದ್ರ ಸರ್ಕಾರ ಅವರಿಗೆ ೧೯೮೭ರಲ್ಲಿ ಪದ್ಮ ವಿಭೂಷಣ ಪುರಸ್ಕಾರ ನೀಡಿ ಗೌರವಿಸಿದೆ. ದೇಶದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಕಾರಣ ಅವರು ವಿಶ್ವದ ಅನೇಕ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಿಂದ ಗೌರವ ಡಾಕ್ಟರೇಟ್‌ಗಳನ್ನು ಪಡೆದಿದ್ದಾರೆ.

ಶಾಂತ, ವಿದ್ವತ್‌ಪೂರ್ಣ ಹಾಗೂ ನಾಯಕತ್ವದ ಪ್ರತಿರೂಪವಾಗಿದ್ದ ಅವರು ಆರ್ಥಿಕ ಸುಧಾರಣೆ ಮತ್ತು ಅಭಿವೃದ್ಧಿಯ ದಾರಿಯಲ್ಲಿ ಭಾರತವನ್ನು ಮುನ್ನಡೆಸಿದ್ದರು.

*************

ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ.

ತಮ್ಮ ಸಂದೇಶದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಡಾ. ಮನಮೋಹನ್ ಸಿಂಗ್ ಅವರು ಶೈಕ್ಷಣಿಕ ಮತ್ತು ಆಡಳಿತದ ಪ್ರಪಂಚವನ್ನು ಸಮಾನವಾಗಿ ನಿರ್ವಹಿಸಿದ ಅಪರೂಪದ ರಾಜಕಾರಣಿಗಳಲ್ಲಿ ಒಬ್ಬರು. ಮಾಜಿ ಪ್ರಧಾನಿಯವರು, ಭಾರತೀಯ

ಆರ್ಥಿಕತೆಯನ್ನು ಸುಧಾರಿಸಲು ಸರ್ಕಾರಿ ಕಚೇರಿಗಳಲ್ಲಿ ವಿವಿಧ ಪಾತ್ರಗಳಲ್ಲಿ ತಮ್ಮ ನಿರ್ಣಾಯಕ ಕೊಡುಗೆಗಳನ್ನು ನೀಡಿದ್ದಾರೆ ಎಂದಿದ್ದಾರೆ.

ತಮ್ಮ ಸಂದೇಶದಲ್ಲಿ, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರು, ಭಾರತದ ಆರ್ಥಿಕ ಭೂದೃಶ್ಯವನ್ನು ಪರಿವರ್ತಿಸಿದ ಒಬ್ಬ ವಿಶಿಷ್ಟ ಅರ್ಥಶಾಸ್ತ್ರಜ್ಞರಾಗಿದ್ದರು ಎಂದಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ತಮ್ಮ ಸಂದೇಶದಲ್ಲಿ, ಭಾರತ, ದೂರದೃಷ್ಟಿಯ ರಾಜಕಾರಣಿ, ಅಪ್ರತಿಮ ಅರ್ಥಶಾಸ್ತ್ರಜ್ಞನನ್ನು ಕಳೆದುಕೊಂಡಿದೆ. ರಾಷ್ಟ್ರ ನಿರ್ಮಾಣಕ್ಕೆ ಡಾ. ಸಿಂಗ್ ಅವರ ಅಪಾರ ಕೊಡುಗೆಗಳು ಭಾರತೀಯ ಇತಿಹಾಸದಲ್ಲಿ ಶಾಶ್ವತವಾಗಿ ಉಳಿಯುತ್ತವೆ ಎಂದು ಅವರು ಹೇಳಿದ್ದಾರೆ.

ಸಿಂಗ್ ಅವರು ಭಾರತವನ್ನು ಅಪಾರ ಬುದ್ಧಿವಂತಿಕೆ ಮತ್ತು ಸಮಗ್ರತೆಯಿಂದ ಮುನ್ನಡೆಸಿದ್ದರು ಅವರ ನಮ್ರತೆ ಮತ್ತು ಅರ್ಥಶಾಸ್ತ್ರದ ಆಳವಾದ ತಿಳುವಳಿಕೆಯು ರಾಷ್ಟ್ರವನ್ನು ಪ್ರೇರೇಪಿಸಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ತಮ್ಮ ಸಂದೇಶದಲ್ಲಿ ಹೇಳಿದ್ದಾರೆ.

ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್, ಡಾ.ಮನಮೋಹನ್ ಸಿಂಗ್ ಅವರು ಭಾರತೀಯ ಆರ್ಥಿಕತೆಯ ವಾಸ್ತುಶಿಲ್ಪಿಗಳಾಗಿದ್ದರಲ್ಲದೇ, ತಮ್ಮ ಸಭ್ಯತೆಗೂ ಹೆಸರಾಗಿದ್ದರು ಎಂದು ಸ್ಮರಿಸಿದ್ದಾರೆ.

ಭಾರತದ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿಧನಕ್ಕೆ ಜಾಗತಿಕ ನಾಯಕರಾದ ಅಫ್ಘಾನಿಸ್ತಾನದ ಮಾಜಿ ಅಧ್ಯಕ್ಷ ಹಮೀದ್ ಕರ್ಜಾಯ್, ಮಾಲ್ದೀವ್ಸ್ ಮಾಜಿ ಅಧ್ಯಕ್ಷ ಮೊಹಮ್ಮದ್ ನಶೀದ್, ಭಾರತದಲ್ಲಿರುವ ರಷ್ಯಾದ ರಾಯಭಾರಿ ಡೆನಿಸ್ ಅಲಿಪೋವ್ ಸಂತಾಪ ವ್ಯಕ್ತಪಡಿಸಿದ್ದಾರೆ.

*************

ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮತ್ತು ಪ್ರಧಾನಿ ನರೇಂದ್ರ ಮೋದಿ ಇಂದು ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರಿಗೆ ಅವರ ನವದೆಹಲಿಯ ನಿವಾಸದಲ್ಲಿ ಅಂತಿಮ ಗೌರವ ನಮನ ಸಲ್ಲಿಸಿದರು.

ಅವರೊಂದಿಗೆ ಕೇಂದ್ರ ಸಚಿವರಾದ ಅಮಿತ್ ಶಾ, ಜೆ.ಪಿ.ನಡ್ಡ, ಜ್ಯೋತಿರಾಧಿತ್ಯ ಸಿಂಧಿಯಾ, ಮಾಜಿ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾಗಾಂಧಿ ಸೇರಿದಂತೆ ಮತ್ತಿತರ ನಾಯಕರು ಡಾ.ಸಿಂಗ್ ಅವರಿಗೆ ಪುಷ್ಪನಮನ ಸಲ್ಲಿಸಿದರು.

ಬಳಿಕ ವಿಡಿಯೊ ಸಂದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ನಿಧನದಿಂದ ದುಃಖವಾಗಿದೆ. ಎದುರಾಗುವ ಅಡೆತಡೆಗಳನ್ನು ಮೀರಿ ಹೆಚ್ಚಿನ ಸಾಧನೆಯನ್ನು ಹೇಗೆ ಮಾಡುವುದು ಎಂಬುದನ್ನು ತಮ್ಮ ಜೀವನದ ಮೂಲಕ ಮುಂದಿನ ಪೀಳಿಗೆಗೆ ಡಾ.ಮನಮೋಹನ್ ಸಿಂಗ್ ತೋರಿಸಿಕೊಟ್ಟಿದ್ದಾರೆ. ಒಬ್ಬ ಅದ್ಭುತ ಅರ್ಥಶಾಸ್ತ್ರಜ್ಞ ಮತ್ತು ನಾಯಕ ಎಂಬುದರ ಜೊತೆಗೆ ಅವರೊಬ್ಬ ಪ್ರಾಮಾಣಿಕ ಮನುಷ್ಯ ಎಂದು ಅವರನ್ನು ದೇಶ ಎಂದೆಂದಿಗೂ ಸ್ಮರಿಸಲಿದೆ ಎಂದಿದ್ದಾರೆ.

ಧ್ವನಿ: ಪಿಎಂ

ಡಾ.ಮನಮೋಹನ್ ಸಿಂಗ್ ಅವರ ಪಾರ್ಥಿವ ಶರೀರವನ್ನು ನಾಳೆ ನವದೆಹಲಿಯ ಕಾಂಗ್ರೆಸ್ ಪ್ರಧಾನ ಕಚೇರಿಗೆ ಅಂತಿಮ ದರ್ಶನಕ್ಕೆ ತರಲಾಗುವುದು. ಅವರ ಅಂತ್ಯಸಂಸ್ಕಾರ ನಾಳೆ ನಡೆಯುವ ಸಾಧ್ಯತೆ ಇದೆ.

*************

ಹಣಕಾಸು ವಲಯದಲ್ಲಿ ಕೃತಕ ಬುದ್ಧಿಮತ್ತೆಯನ್ನು ಜವಾಬ್ದಾರಿಯುತ ಮತ್ತು ನೈತಿಕ ಚೌಕಟ್ಟಿನಲ್ಲಿ ಅಭಿವೃದ್ಧಿ ಪಡಿಸಲು ಭಾರತೀಯ ರಿಸರ್ವ್ ಬ್ಯಾಂಕ್ ೮ ಸದಸ್ಯರ ಸಮಿತಿಯನ್ನು ರಚಿಸಿದೆ.

ಈ ಕುರಿತು ಆರ್‌ಬಿಐ ಅಧಿಕೃತ ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ಈ ಸಮಿತಿಗೆ ಐಐಟಿ ಬಾಂಬೆಯ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ.ಪುಷ್ಪಕ್ ಭಟ್ಟಾಚಾರ್ಯ ಅವರು ನೇತೃತ್ವವಹಿಸಲಿದ್ದಾರೆ.

ಈ ಸಮಿತಿಯು ಜಾಗತಿಕವಾಗಿ ಮತ್ತು ಭಾರತದಲ್ಲಿ ಹಣಕಾಸು ಸೇವೆಗಳಲ್ಲಿ ಕೃತಕ ಬುದ್ಧಿಮತ್ತೆಯ ಅಳವಡಿಕೆಯನ್ನು ಪರಿಶೀಲಿಸುತ್ತದೆ. ಅಲ್ಲದೇ ಇದರ ಅಳವಡಿಕೆಯ ಸವಾಲುಗಳು, ಮೌಲ್ಯಮಾಪನ ಮತ್ತು ಮೇಲ್ವಿಚಾರಣೆಯ ಕುರಿತಾಗಿ ಸಮಿತಿಯು ಶಿಫಾರಸು ಮಾಡಲಿದೆ.

*************

ಆಸ್ಟ್ರೇಲಿಯಾದ ಮೆಲ್ಬರ್ನ್‌ನಲ್ಲಿ ನಡೆಯುತ್ತಿರುವ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್ ಸರಣಿಯ ೪ನೇ ಪಂದ್ಯದ ೨ನೇ ದಿನದ ಆಟದ ಅಂತ್ಯಕ್ಕೆ ಭಾರತ ೫ ವಿಕೆಟ್ ನಷ್ಟಕ್ಕೆ ೧೬೪ ರನ್ ಗಳಿಸಿದೆ.

ದಿನದ ಆರಂಭದಲ್ಲಿ ತನ್ನ ಮೊದಲ ಇನ್ನಿಂಗ್ಸ್ ಮುಂದುವರೆಸಿದ್ದ ಆಸ್ಟ್ರೇಲಿಯಾ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೪೭೪ ರನ್ ಗಳಿಸಿತು.

ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ನಿಧನದ ಹಿನ್ನೆಲೆಯಲ್ಲಿ ಗೌರವ ಸೂಚಕವಾಗಿ ಭಾರತೀಯ ಕ್ರಿಕೆಟ್ ತಂಡ ಇಂದು ಕಪ್ಪು ಪಟ್ಟಿಯನ್ನು ಧರಿಸಿದೆ.

*************

ಹೈದರಾಬಾದ್‌ನ ಡೆಕ್ಕನ್ ಅರೇನಾದಲ್ಲಿ ನಡೆಯುತ್ತಿರುವ ಸಂತೋಷ್ ಟ್ರೋಫಿ ಫುಟ್‌ಬಾಲ್ ಪಂದ್ಯಾವಳಿಯ ಮೂರನೇ ಕ್ವಾರ್ಟರ್ ಫೈನಲ್‌ನಲ್ಲಿ ಕೇರಳ ತಂಡ ಜಮ್ಮು ಮತ್ತು ಕಾಶ್ಮೀರವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೨.೩೦ ಕ್ಕೆ ಆರಂಭವಾಗಲಿದೆ.

ನಾಲ್ಕನೇ ಕ್ವಾರ್ಟರ್ ಫೈನಲ್‌ನಲ್ಲಿ ಮೇಘಾಲಯ ಸಂಜೆ ಸರ್ವಿಸಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

ಮೊದಲ ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಇಂದು ಒಡಿಶಾ ವಿರುದ್ಧ ೩-೧ ಗೋಲುಗಳ ಅಂತರದಿಂದ ಪಶ್ಚಿಮ ಬಂಗಾಳ ತಂಡ ಗೆಲುವು ಸಾಧಿಸಿ, ಸೆಮಿಫೈನಲ್ ಪ್ರವೇಶಿಸಿದೆ.

ಮತ್ತೊಂದು ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಮಣಿಪುರ ತಂಡ, ದೆಹಲಿ ತಂಡವನ್ನು ಮಣಿಸಿ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದೆ.

*******ಮುಕ್ತಾಯ******